ಕರ್ನಾಟಕ ಸರ್ಕಾರ

ಂಖ್ಯೆ:ಗ್ರಾಅಪ 131 ಗ್ರಾಪಂಕಾ 2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:15-03-2016

ಂದ:
ರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
ೆಂಗಳೂರು.

ವರಿಗೆ:
ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳು.

ಾನ್ಯರೆ,

**ವಿಷಯ:** ರಾಜ್ಯದಲ್ಲಿನ ಎಲ್ಲಾ ಗ್ರಾಮ ಪಂಚಾಯಿತಿಗಳ ಕಾರ್ಯದರ್ಶಿ/ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಬೆಳೆ ಕಟಾಯಿಸುವ, ಪ್ರಯೋಗಗಳನ್ನು ನಡೆಸುವ ಪ್ರಕ್ರಿಯೆಗಳಲ್ಲಿ ಭಾಗವಹಿಸುವಂತೆ ಆದೇಶಿಸಿರುವ ಬಗ್ಗೆ.

**ಉಲ್ಲೇಖ:** 1) ಸರ್ಕಾರದ ಆದೇಶದ ಸಂಖ್ಯೆ:ಗ್ರಾಅಪ 215 ಗ್ರಾಪಂಕಾ 2013 ದಿ:16-09-2013.
2) ಸರ್ಕಾರದ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ರವರ ಪತ್ರ ಸಂಖ್ಯೆ ಇಲ್ಲ ದಿನಾಂಕ:08-02-2016

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ (2)ರ ಸರ್ಕಾರದ ಪತ್ರದಲ್ಲಿ, ಬೆಳೆ ಕಟಾವು ಪ್ರಯೋಗಗಳನ್ನು ವೈಜ್ಞಾನಿಕ ರೀತಿಯಲ್ಲಿ ಕೈಗೊಳ್ಳಲು ಗ್ರಾಮೀಣಾಭಿವೃದ್ಧಿ ಇಲಾಖೆಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಉಲ್ಲೇಖಿತ (1)ರಲ್ಲಿ ಆದೇಶ ಹೊರಡಿಸಲಾಗಿರುತ್ತದೆ. ಆದರೂ ಸಹ ಕೆಲವು ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಈ ವಿಷಯದಲ್ಲಿ ಆಸಕ್ತಿ ತೋರದ ಕಾರಣ ಸರ್ಕಾರಕ್ಕೆ ನಿಗದಿತ ಅವಧಿಯಲ್ಲಿ ಬೆಳೆವಾರು ಇಳುವರಿ ಮಾಹಿತಿಯನ್ನು ಸಲ್ಲಿಸಲು ವಿಳಂಬವಾಗುತ್ತಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ವಹಿಸಲಾದ ಶೇ.20ರಷ್ಟು ಬೆಳೆ ಕಟಾವು ಪ್ರಯೋಗಗಳಲ್ಲಿ ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಅವರಿಗೆ ನೀಡಲಾದಂತಹ ಬೆಳೆ ಕಟಾವು ಪ್ರಯೋಗಗಳನ್ನು ಕಡ್ಡಾಯವಾಗಿ ಹಾಗೂ ಸಮರ್ಪಕವಾಗಿ ಕೈಗೊಳ್ಳುವಂತೆ ಸೂಚನೆ ನೀಡಬೇಕೆಂದು ಕೋರಿರುತ್ತಾರೆ.

ಆದುದರಿಂದ, ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಕಾರ್ಯದರ್ಶಿ / ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಮೂಲ ಕಾರ್ಯಕರ್ತರನ್ನಾಗಿ / ಮೇಲ್ವಿಚಾರಕರರನ್ನಾಗಿ ನೇಮಿಸಿ ಬೆಳೆ ಕಟಾವು ಪ್ರಯೋಗಗಳಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳಲು ಉಲ್ಲೇಖಿತ (1)ರ ಆದೇಶದಂತೆ ನಿರ್ದೇಶನ ನೀಡಲು ತಮ್ಮನ್ನು ಕೋರಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ನಿಮ್ಮ ನಂಬುಗೆಯ,

(ಟಿ.ವಿ. ಅರುಣ್‌ಕುಮಾರ್),
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,